**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ:575/2023**

**ಪಿ.ಡಬ್ಲ್ಯೂ-1**
**ಸಿ.ಡಬ್ಲ್ಯೂ-1**

**ಸಾಕ್ಷಿಗೆ ದಿನಾಂಕ 20-9-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಸಾಕ್ಷಿಯ ಹೆಸರು : ನವೀನ

ತಂದೆಯ ಹೆಸರು : ವಿಜಯಕುಮಾರ್

ವಯಸ್ಸು : 30 ವರ್ಷ

ಉದ್ಯೋಗ : ಜೆರಾಕ್ಸ್ ಅಂಗಡಿ

ವಾಸಸ್ಥಳ : ಗೊರವಿನಕಲ್ಲು

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ನನ್ನ ಅಣ್ಣ. ಮೃತ ಶಂಕರಪ್ಪ ನನ್ನ ಮಾವ. ಚಾಸಾ-9 ನನ್ನ ಅತ್ತಿಗೆ.

ಸುಮಾರು 2 ವರ್ಷಗಳ ಹಿಂದೆ, ನಿಖರ ದಿನಾಂಕ ನೆನಪಿಲ್ಲ, ಮೃತ ಅಂಕರಪ್ಪ ರವರು ಅಪಘಾತದಲ್ಲಿ ಮರಣ ಹೊಂದಿರುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಯಾರ ತಪ್ಪಿನಿಂದ ಅಪಘಾತ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ.

**ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿಲಾಗಿದ್ದು ಸದರಿ ದಾಖಲೆ ದೂರು ಆಗಿದ್ದು ಅದನ್ನು ನಿಪಿ-1 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.** ನಿಪಿ-1 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ದಿ: 11-10-2022 ರಂದು ಬೆಳಗ್ಗೆ ಆರೋಪಿ ಮತ್ತು ಆವರ ಮಾವ ಶಂಕರಪ್ಪ ಇವರಿಗೆ ಅಪಘಾತ ಆಗಿದ್ದು ಅವರು ಹೊಸದುರ್ಗ ಸರ್ಕಾರಿ

ಆಸ್ಪತ್ರೆಯಲ್ಲಿಚಿಕಿತ್ಸೆಗೆ ದಾಖಲಾಗಿರುವ ವಿಚಾರ ನನಗೆ ತಿಳಿದು ಬಂತು ಎಂದರೆ ಸರಿಯಲ್ಲ. ನಾನು ಆಸ್ಪತ್ರೆಗೆ ಹೋಗಿ ನೋಡಲಾಗಿ ಶಂಕರಪ್ಪನವರು ಮಾತನಾಡದ ಸ್ಥಿತಿಯಲ್ಲಿ ಇದ್ದರು ಎಂದರೆ ಸರಿಯಲ್ಲ. ಅಪಘಾತದ ಬಗ್ಗೆ ವಿಚಾರಿಸಲಾಗಿ ಆರೋಪಿ ಮಾಹಿತಿ ನೀಡಿದ್ದು ದಿನಾಂಕ 11-10-2022 ರಂದು ಬೆಳಗ್ಗೆ ಸುಮಾರು 6 ಗಂಟೆಗೆ ಆರೋಪಿ ತನ್ನ ಮೋಟಾರು ಬೈಕ್ ಕೆಎ-16-ಎಕ್ಸ್7438 ಶಂಕರಪ್ಪರವರನ್ನು ಹಿಂದೆ ಕೂಡಿಸಿಕೊಂಡು ಲಕ್ಕಿಹಳ್ಳಿ ಗೇಟ್ನಿಂದ ಲಕ್ಕಿಹಳ್ಳಿಗೆ ಹೋಗುವಾಗ ಆರೋಪಿ ಬೈಕನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಹೋಗಿ ಹಂಪ್ ಹತ್ತಿರ ಒಂದೇ ಬಾರಿ ಬ್ರೇಕ್ ಹಾಕಿದಾಗ ಬೈಕ್ ನಿಯಂತ್ರಣ ತಪ್ಪಿ ಬೈಕ್ ಸಮೇತ ಇಬ್ಬರು ರಸ್ತೆಯ ಮೇಲೆ ಬಿದ್ದಿದ್ದು, ಹಿಂದೆ ಕುಳಿತಿದ್ದ ಶಂಕರಪ್ಪ ಅವರಿಗೆ ತಲೆಗೆ ಮೈಕೈಗೆ ಪೆಟ್ಟು ಬಿದ್ದು ರಕ್ತಗಾಯವಾಗಿದ್ದು ಆರೋಪಿಯ ಕೈಕಾಲುಗಳಿಗೆ ತರಚಿದ ಗಾಯವಾಗಿದ್ದು ಅಲ್ಲಿ ಇದ್ದವರು ಗಾಯಗೊಂಡವರನ್ನು ಚಿಕಿತ್ಸೆಗಾಗಿ ಹೊಸದುರ್ಗ ಆಸ್ಪತ್ರೆಗೆ ಕರೆದುಕೊಂಡು ಬಂದಿರುವುದಾಗಿ ಆರೋಪಿ ನನಗೆ ತಿಳಿಸಿದರು ಎಂದರೆ ಸರಿಯಲ್ಲ. ನಂತರ ಶಂಕರಪ್ಪನವರಿಗೆ ಚಿಕಿತ್ಸೆ ನೀಡಿದ ವೈದ್ಯರು ಬೇರೆ ಆಸ್ಪತ್ರೆಗೆ ಕರೆದುಕೊಂಡು ಹೋಗಲು ತಿಳಿಸಿದ್ದು ಶಿವಮೊಗ್ಗದ ಮೆಗ್ಗಾನ್ ನಾರಾಯಣ ಹೃದಯಾಲಯ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಕೊಡಿಸಿ ಅಲ್ಲಿಂದ ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದೇವೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತೆ ಆರೋಪಿಯ ವಿರುದ್ದ ಕಾನೂನು ಕ್ರಮ ಜರುಗಿಸುವಂತೆ ನಿಪಿ-1 ರಂತೆ ನಾನು ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ನಾನು ನಿಪಿ-1 ರಿಂತೆ ದೂರು ನೀಡಿದ್ದರೂ ಸಹ ಆರೋಪಿ ನನ್ನ ಅಣ್ಣ ನಾದ ಕಾರಣ ಆತನಿಗೆ ಸಹಾಯ ಮಾಡಲು_ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಡಿ ಜಿ ವಕೀಲರಿಂದಃ</u>**

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸುತ್ತಾರೆ._

**<u>ಮರು ವಿಚಾರಣೆ : ಇಲ್ಲ</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ ಅದೆ.**

**(ಪ್ರಸನ್ನಕುಮಾರ್ ಸಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಹೊಸದುರ್ಗ.**